ಶ್ರೀ ರೇವು ನಾಯಕ್ ಬೆಳಮಗಿ (ಪಶುಸಂಗೋಪನೆ ಸಚಿವರು)

ಅ) ಉಡುಪಿ ತಾಲ್ಲೂಕಿನಲ್ಲಿ ಮೇಲ್ದರ್ಜೆಗೇರಿಸಲು 3 ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲು ಉದ್ದೇಶಿಸಲಾಗಿದೆ

ಆ) ಉಡುಪಿ ವಿಧಾನ ಸಭಾಕ್ಷೇತ್ರದಲ್ಲಿ ಉದ್ಯವರ ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರ ಮತ್ತು ಬ್ರಹ್ಮಾವರ ವಿಧಾನಸಭಾ ಕ್ಷೇತ್ರದಿಂದ ಕಳ್ತೂರು, ಸಂತೆಕಟ್ಟಿ ಮತ್ತು ಬಾರ್ಕೂರು, ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರಗಳೂ ಮೇಲ್ದರ್ಜೇಗೇರಿಸಲು ಉದ್ದೇಶಿಸಲಾಗಿದೆ

594(706) ಶ್ರೀ ಜಯಪ್ರಕಾಶ್ ಹೆಗ್ಡೆ .ಕೆ (ಬ್ರಹ್ಮಾವರ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉಡುಪಿ ತಾಲ್ಲೂಕಿನಲ್ಲಿ ಮೇಲ್ದರ್ಜೆಗೇರಿಸಲು ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಆಸ್ಪತ್ರೆಗಳ ಸಂಖ್ಯೆ ಎಷ್ಟು?

ಆ) ಹಾಗಿದ್ದಲ್ಲಿ, ಮೇಲ್ದರ್ಜೆಗೇರಿಸಲು ಉದ್ದೇಶಿಸಲಾಗಿರುವವುಗಳ ಸ್ಥಳಗಳಾವುವು?

ಶ್ರೀ ಆರ್ ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಒಂದು ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಜಿಲ್ಲಾ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಬಂದಿರುತ್ತದೆ

ಆ) ಕುಂದಾಪುರ ತಾಲ್ಲೂಕಿನ ಬೈಂದೂರು ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಉಡುಪಿ ಜಿಲ್ಲಾ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಲು ಪ್ರಸ್ತಾವನೆ ಬಂದಿರುತ್ತದೆ ಮಾರ್ಗಸೂಚಿ ಪ್ರಕಾರ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು

595(707) ಶ್ರೀ ಜಯಪ್ರಕಾಶ್ ಹೆಗ್ಡೆ ಕೆ (ಬ್ರಹ್ಮಾವರ) ಮಾನ್ಯ ಮೀನುಗಾರಿಕೆ ಮತ್ತು ಮುಜರಾಯಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಕರಾವಳಿ ಜಿಲ್ಲೆಗಳಲ್ಲಿ ಮೀನುಗಾರರ ಸಂಖ್ಯೆ ಪರಿಹಾರ ನಿಧಿಯಲ್ಲಿ ಬಾಕಿ ಇರುವ ಪ್ರಕರಣಗಳು ಎಷ್ಟು?

ಆ) 2004 ರಿಂದ ನೀಡಿರುವ ಪರಿಹಾರದ ವಿವರವನ್ನು ಕ್ಷೇತ್ರವಾರು ನೀಡುವುದು?